ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯ ವಸತಿ ಶಾಲೆಗಳ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

424 (526) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಸದರಿ ಶಾಲೆಗಳಲ್ಲಿ ಮಂಜೂರಾಗಿರುವ ಬೋಧಕ/ಬೋಧಕೇತರ ಹಾಗೂ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸರ್ಕಾರಿ ಶಾಲೆಯಲ್ಲಿನ ಬೋಧಕ/ಬೋಧಕೇತರಿಗೆ ನೀಡುತ್ತಿರುವ ಸೌಲಭ್ಯಗಳನ್ನು ಮೇಲ್ಕಂಡ ವಸತಿ ಶಾಲೆಗಳಲ್ಲಿ ಖಾಯಂ ಬೋಧಕ/ಬೋಧಕೇತರರಿಗೆ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸದರಿ ಬೋಧಕ/ಬೋಧಕೇತರರನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಳಿಸಲು ಇರುವ ಕಾನೂನಿನ ತೊಡಕುಗಳೇನು? (ವಿವರ ನೀಡುವುದು)